ಪ್ರೀತಿ, ವ್ಯಸನ, ಭಾವನೆಗಳ ಆಟದಲ್ಲಿ 'ಲಾರ್ಡ್ ಗಾಗ'ನ ಅಬ್ಬರ!

ಕಲ್ಟ್ ಜಗತ್ತಿನ ನಿಗೂಢ ಕತೆ ತೆರೆದಿಡುವ ಟೀಸರ್ ಬಿಡುಗಡೆ



ಪ್ರೀತಿ ಯಾವಾಗ ವ್ಯಸನವಾಗುತ್ತದೆ? ಭಾವನೆಗಳೇ ಮನುಷ್ಯನನ್ನು ನಿಯಂತ್ರಿಸಲಾರಂಭಿಸಿದರೆ ಆಯ್ಕೆಗಳ ಹಾದಿ ಎಲ್ಲಿಗೆ ಕರೆದೊಯ್ಯುತ್ತದೆ? ಇಂತಹ ಕುತೂಹಲಕಾರಿ ಪ್ರಶ್ನೆಗಳನ್ನು ಹೊತ್ತು, ವಿಭಿನ್ನ ಕಥನದ ಮೂಲಕ ಪ್ರೇಕ್ಷಕರನ್ನು ಸೆಳೆಯಲು ಸಜ್ಜಾಗಿದೆ 'ಲಾರ್ಡ್ ಗಾಗ' ಸಿನಿಮಾ. ಸಸ್ಪೆನ್ಸ್, ಪ್ರಣಯ ಮತ್ತು ಮನೋವೈಜ್ಞಾನಿಕ ತಿರುವುಗಳ ಸಂಗಮವಾಗಿರುವ ಈ ಚಿತ್ರದ ಮೊದಲ ಟೀಸರ್ ಬಿಡುಗಡೆಯಾಗಿದ್ದು, ತನ್ನ ಕಲ್ಟ್ ಶೈಲಿಯ ನಿರೂಪಣೆಯಿಂದ ಗಮನ ಸೆಳೆಯುತ್ತಿದೆ.

ಕನ್ನಡ ಚಿತ್ರರಂಗದಲ್ಲಿ ವಿಭಿನ್ನ ಶೀರ್ಷಿಕೆ ಹಾಗೂ ವಿಶಿಷ್ಟ ಕಥಾವಸ್ತುವಿನ ಮೂಲಕ ಕುತೂಹಲ ಮೂಡಿಸಿರುವ 'ಲಾರ್ಡ್ ಗಾಗ', ಈಗಾಗಲೇ ಬಹುತೇಕ ಚಿತ್ರೀಕರಣ ಪೂರ್ಣಗೊಳಿಸಿದೆ. ಕೆಲ ತಿಂಗಳ ಹಿಂದೆ ಚಿತ್ರದ ಶೀರ್ಷಿಕೆ ಮತ್ತು ಮೋಷನ್ ಪೋಸ್ಟರ್ ಬಿಡುಗಡೆ ಮಾಡಿದ್ದ ಚಿತ್ರತಂಡ, ಇದೀಗ ಟೀಸರ್ ಮೂಲಕ ಕಥೆಯ ಎಳೆಯೊಂದನ್ನು ಬಿಚ್ಚಿಟ್ಟಿದೆ.

ಯುವ ನಿರ್ದೇಶಕ ವೈಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸುತ್ತಿರುವ ಈ ಚಿತ್ರವನ್ನು ಝೀರೋ ಗ್ರ್ಯಾವಿಟಿ ಫಿಲಂಸ್ ಬ್ಯಾನರ್‌ನಲ್ಲಿ ಉದ್ಯಮಿ ಮುಕಿ ರೆಘುನಾಥನ್ ನಿರ್ಮಿಸುತ್ತಿದ್ದಾರೆ.

ಹೆಸರೇ ಸೂಚಿಸುವಂತೆ 'ಲಾರ್ಡ್ ಗಾಗ' ವಿಭಿನ್ನ ಕಲ್ಟ್ ಜಗತ್ತನ್ನು ಪರಿಚಯಿಸುವ ಪ್ರಯತ್ನ. ಮನುಷ್ಯನ ಮನಸ್ಸಿನಲ್ಲಿ ಹುಟ್ಟುವ ಪ್ರೀತಿ, ಪ್ರೇಮ, ಪ್ರಣಯ, ಭಾವನೆ, ವ್ಯಸನ ಹಾಗೂ ಆಯ್ಕೆಗಳ ಸುತ್ತ ಕಥೆ ಸಾಗುತ್ತದೆ. ಈ ಅಂಶಗಳನ್ನು ರೊಮ್ಯಾಂಟಿಕ್ ಸೈಕಲಾಜಿಕಲ್ ಥ್ರಿಲ್ಲರ್ ಮಾದರಿಯಲ್ಲಿ ತೆರೆಗೆ ತಂದಿರುವುದಾಗಿ ಚಿತ್ರತಂಡ ಹೇಳಿಕೊಂಡಿದೆ. ಬಿಡುಗಡೆಯಾಗಿರುವ ಟೀಸರ್ ಕೂಡ ವಿಭಿನ್ನ ಶೈಲಿಯ ಮೂಲಕ ನೋಡುಗರಲ್ಲಿ ಚಿತ್ರದ ಕಥೆಯ ಬಗ್ಗೆ ಮತ್ತಷ್ಟು ಕುತೂಹಲ ಮೂಡಿಸಿದೆ.

ಚಿತ್ರದಲ್ಲಿ ಶೂನ್ಯ ನಾಯಕನಾಗಿ ನಟಿಸಿದ್ದು, ಸ್ವರೂಪಿಣಿ ಮತ್ತು ದಿಶಾ ನಾಯಕಿಯರಾಗಿ ಕಾಣಿಸಿಕೊಂಡಿದ್ದಾರೆ. ನಿರ್ಮಾಪಕ ಮುಕಿ ರೆಘುನಾಥನ್ ಕೂಡ ಚಿತ್ರದಲ್ಲಿ ಪಾತ್ರವೊಂದಕ್ಕೆ ಬಣ್ಣ ಹಚ್ಚಿದ್ದಾರೆ.

ಕನ್ನಡದ ಜೊತೆಗೆ ತಮಿಳು, ತೆಲುಗು, ಮಲಯಾಳಂ, ಹಿಂದಿ, ಬೆಂಗಾಲಿ ಹಾಗೂ ಭೋಜಪುರಿ ಸೇರಿದಂತೆ ಏಳಕ್ಕೂ ಹೆಚ್ಚು ಭಾಷೆಗಳಲ್ಲಿ ಚಿತ್ರವನ್ನು ಏಕಕಾಲದಲ್ಲಿ ಬಿಡುಗಡೆ ಮಾಡುವ ಯೋಜನೆಯನ್ನು ಚಿತ್ರತಂಡ ಹಾಕಿಕೊಂಡಿದೆ. ಸದ್ಯ ಟೀಸರ್ ಮೂಲಕ ನಿರೀಕ್ಷೆ ಹೆಚ್ಚಿಸಿರುವ ತಂಡ, ಶೀಘ್ರದಲ್ಲೇ ಚಿತ್ರದ ಹಾಡುಗಳು ಮತ್ತು ಟ್ರೇಲರ್ ಬಿಡುಗಡೆ ಮಾಡಲು ಸಿದ್ಧತೆ ನಡೆಸುತ್ತಿದೆ.

